**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಜಲಾಲಪೂರ (ಹಳೇ ದಿಗ್ಗೇವಾಡಿ) ಮತ್ತು ಚಿಕ್ಕೋಡಿ ತಾಲ್ಲೂಕಿನ ಇಂಗಳಿ ಗ್ರಾಮಗಳ ಮಧ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ರೂ.2792.92 ಲಕ್ಷ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

*******

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ಟಿಜಿಸಿ/1174/2017-18/5930 ದಿನಾಂಕ:29.12.2017, 24.03.2018, 24.12.2018 ಹಾಗೂ 28.03.2019.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕೆಎನ್ಎನ್/ತಾಂತ್ರಿಕ/ಟಿಜಿಸಿ/1174/2018-19/2796 ದಿನಾಂಕ:30.08.2019.

**ಪ್ರಸ್ತಾವನೆ:**

ಮೇಲೆ(1)ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರಗಳಲ್ಲಿ, ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಜಲಾಲಪೂರ (ಹಳೇ ದಿಗ್ಗೇವಾಡಿ) ಮತ್ತು ಚಿಕ್ಕೋಡಿ ತಾಲ್ಲೂಕಿನ ಇಂಗಳಿ ಗ್ರಾಮಗಳ ಮಧ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣದಿಂದ ರಾಯಬಾಗ, ಚಿಕ್ಕೋಡಿ ಮತ್ತು ಅಥಣಿ ತಾಲ್ಲೂಕಿನಡಿ ಬರುವ ಇಂಗಳಿ, ಮಾಂಜರಿ, ಅಂಕಲಿ, ಯಡೂರ ಜೈನಾಪೂರ ಮಾಂಗನೂರ, ಕಲ್ಲೋಳ, ದಿಗ್ಗೇವಾಡಿ, ಬಾವನ ಸವದತ್ತಿ, ಸಸಲಾಪೂರ, ಮಳವಾಡ, ಜೂಗೂಳ, ಶಿರಗುಪ್ಪಿ, ಮಂಗಾವತಿ, ಯಕ್ಸಂಬಾ ಪಟ್ಟಣ ಹಾಗೂ ಚಿಕ್ಕೋಡಿ ನಗರ ಈ 16 ಗ್ರಾಮಗಳಿಗೆ ಬೇಸಿಗೆ ಕಾಲದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಉದ್ದೇಶಿಸಲಾಗಿರುತ್ತದೆ; ಸದರಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣದಿಂದ ರಾಯಬಾಗ ಮತ್ತು ಚಿಕ್ಕೋಡಿ ತಾಲ್ಲೂಕಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸಬಹುದಾಗಿದ್ದು, ಇದರಿಂದ ಈ ಭಾಗದ ರೈತರುಗಳಿಗೆ ದೈನಂದಿನ ಕಾರ್ಯ ಚಟುವಟಿಕೆಗಳಿಗೆ ಅನುಕೂಲವಾಗುತ್ತದೆ; ಸದರಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣದಿಂದ ಈ ಭಾಗದ ಅಭಿವೃದ್ಧಿಗೆ ಪೂರಕವಾಗುವ ಉದ್ದೇಶದಿಂದ ಸದರಿ ಕಾಮಗಾರಿಯನ್ನು ಕೈಗೊಳ್ಳುವಂತೆ ಸ್ಥಳೀಯ ರೈತರು ಹಾಗೂ ಜನಪ್ರತಿನಿಧಿಗಳು ಮನವಿ ಮಾಡಿರುತ್ತಾರೆಂದು ಎಂದು ವರದಿಸಿರುತ್ತಾರೆ.

ಮುಂದುವರೆದು, ದಿನಾಂಕ:20.07.2017 ರಂದು ಜರುಗಿದ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 26ನೇ ಸಭೆಯ ಮುಂದೆ ಮಂಡಿಸಿದ್ದು, ಸಮಿತಿಯು ಸದರಿ ಪ್ರಸ್ತಾವನೆಯನ್ನು ಅನುಮೋದನೆಗಾಗಿ ನಿಗಮದ ನಿರ್ದೇಶಕರ ಮಂಡಳಿಗೆ ಶಿಫಾರಸ್ಸು ಮಾಡಿರುತ್ತದೆ; ಅದರಂತೆ, ದಿನಾಂಕ:21.11.2017 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 81ನೇ ಸಭೆಯಲ್ಲಿ ಈ ಕಾಮಗಾರಿಯ ಪ್ರಸ್ತಾವನೆಯನ್ನು ಅನುಮೋದನೆಗಾಗಿ ಮಂಡಿಸಲಾಗಿದ್ದು, ಮಂಡಳಿಯು ಪ್ರಸ್ತಾವಿತ ಯೋಜನೆಯ ರೂ.20.60 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಅನುಮೋದಿಸಿ ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಶಿಫಾರಸ್ಸು ಮಾಡಿರುತ್ತದೆ; ಸದರಿ ಯೋಜನೆಗೆ 2017-18ನೇ ಸಾಲಿನಲ್ಲಿ 1/3 ಅನುದಾನ ಪ್ರಾವಿಧಾನತೆಯನ್ನು ಮಾಡಿಕೊಂಡು ಆ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ರವರು ತಿಳಿಸಿರುತ್ತಾರೆ.

ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು 2017-18ನೇ ಸಾಲಿನ ದರಪಟ್ಟಿಯನ್ವಯ ರೂ.20.60 ಕೋಟಿಗಳಿಗೆ ತಯಾರಿಸಿದ್ದು, ನಂತರ ಇದನ್ನು 2018-19ನೇ ಸಾಲಿನ ದರಪಟ್ಟಿಯನ್ವಯ ಪರಿಷ್ಕರಿಸಿ ರೂ.2792.92 ಲಕ್ಷಗಳಿಗೆ ಸರಿಪಡಿಸಿ ದಿನಾಂಕ:06.06.2019ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ರವರು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

..2

ಮೇಲೆ(2)ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ರವರ ಪತ್ರ ದಿನಾಂಕ:30.08.2019ರಲ್ಲಿ ರಾಯಬಾಗ, ಚಿಕ್ಕೋಡಿ ಹಾಗೂ ಅಥಣಿ ತಾಲ್ಲೂಕಿನ ಗ್ರಾಮಗಳ ಜನಜಾನುವಾರುಗಳಿಗೆ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ಮಾತ್ರ ಸದರಿ ಬ್ಯಾರೇಜಿನಲ್ಲಿ 0.176 ಟಿಎಂಸಿ ನೀರನ್ನು ಸಂಗ್ರಹಿಸಲು ಯೋಜನೆಯನ್ನು ರೂಪಿಸಿದ್ದು, ರಾಷ್ಟ್ರೀಯ ಜಲನೀತಿಯನ್ವಯ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಬೇಕಾಗಿರುತ್ತದೆ; ಕುಡಿಯುವ ನೀರಿಗೆ 20% ಮಾತ್ರ consumptive ಬಳಕೆಯಾಗಿ ಪರಿಗಣಿಸಬೇಕಾಗಿರುವುದರಿಂದ, ನೀರಿನ ಪ್ರಮಾಣವು ಕೇವಲ 0.035 ಟಿಎಂಸಿ ಮಾತ್ರ ಇದ್ದು, ಇದನ್ನು ಕೃಷ್ಣಾ ನದಿಯಿಂದ ಹಂಚಿಕೆಯಾಗಿರುವ ಯೋಜನೆಗಳ ಒಟ್ಟಾರೆ ಉಳಿತಾಯದಲ್ಲಿ ಪರಿಗಣಿಸಬಹುದಾಗಿರುತ್ತದೆ; ಸದರಿ ಕಾಮಗಾರಿಯ ರೂ.2792.92 ಲಕ್ಷಗಳ ಮಾರ್ಪಡಿತ ವಿವರವಾದ ಯೋಜನಾ ವರದಿಗೆ ಮುಂಬರುವ ನಿಗಮದ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ವರದಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಜಲಾಲಪೂರ (ಹಳೇ ದಿಗ್ಗೇವಾಡಿ) ಮತ್ತು ಚಿಕ್ಕೋಡಿ ತಾಲ್ಲೂಕಿನ ಇಂಗಳಿ ಗ್ರಾಮಗಳ ಮಧ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ರೂ.2792.92 ಲಕ್ಷ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ರವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಸದರಿ ಕಾಮಗಾರಿಯ ರೂ.2792.92 ಲಕ್ಷಗಳ ಮಾರ್ಪಡಿತ ವಿವರವಾದ ಯೋಜನಾ ವರದಿಗೆ ಮುಂಬರುವ ನಿಗಮದ ನಿರ್ದೇಶಕರ ಮಂಡಳಿಯ ಸಭೆಯ ಅನುಮೋದನೆ ಪಡೆಯುವ ಷರತ್ತುಗಳಿಗೊಳಪಟ್ಟು, ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 39 ಎನ್ಐಎನ್ 2018, ಬೆಂಗಳೂರು, ದಿನಾಂಕ: 17.10.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಜಲಾಲಪೂರ (ಹಳೇ ದಿಗ್ಗೇವಾಡಿ) ಮತ್ತು ಚಿಕ್ಕೋಡಿ ತಾಲ್ಲೂಕಿನ ಇಂಗಳಿ ಗ್ರಾಮಗಳ ಮಧ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ರೂ.2792.92 ಲಕ್ಷ (ಇಪ್ಪತ್ತೇಳು ಕೋಟಿ ತೊಂಬತ್ತೆರೆಡು ಲಕ್ಷದ ತೊಂಬತ್ತೆರೆಡು ಸಾವಿರ ರೂಪಾಯಿಗಳು ಮಾತ್ರ) ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 557 ಆಕೋ-1/2019 ದಿನಾಂಕ:27.09.2019ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

17/10/2019
(ಎಸ್.ಎನ್.ಕೇಶವಪ್ರಕಾಶ್)
ಸರ್ಕಾರದ ವಿಶೇಷ ಕರ್ತವ್ಯಾಧಿಕಾರಿ(ತಾಂತ್ರಿಕ-4),
ಜಲ ಸಂಪನ್ಮೂಲ ಇಲಾಖೆ.

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2) ಪ್ರಧಾನ ಮಹಾಲೇಖಪಾಲರು (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.

..3

3) ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ, ಬೆಂಗಳೂರು-560001.
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನ ಸೌಧ, ಬೆಂಗಳೂರು (ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ-560/2019, ದಿನಾಂಕ:03.10.2019ರ ಮೇರೆಗೆ).
5) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ
10) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
11) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
12) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.
13) ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
14) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿ ಬೋರ್ಡ್ ಕಟ್ಟಡ, ಬೆಂಗಳೂರು.
15) ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು.
16) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ (ಉತ್ತರ), ಬೆಳಗಾವಿ.
17) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
18) ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
19) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
20) ಸರ್ಕಾರದ ಉಪ ಕಾರ್ಯದರ್ಶಿಗಳು (ಕೆಬಿಜೆಎನ್), ಜಲಸಂಪನ್ಮೂಲ ಇಲಾಖೆ, ಬೆಂಗಳೂರು.
21) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಜಿಯೋ ಮೆಟ್ರಿಕ್ ಕೇಂದ್ರ, ಆನಂದರಾವ್ ವೃತ್ತ, ಬೆಂಗಳೂರು.
22) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು (10 ಪ್ರತಿಗಳು).
23) ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.

*******